ಕರ್ನಾಟಕ ಸರ್ಕಾರ
ರಾಷ್ಟ್ರೀಯ ಆರೋಗ್ಯ ಅಭಿಯಾನ
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯ**
**ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ವಿಭಾಗ**
# ಜಿ.ಬಿ.-7, ಜಿಲ್ಲಾಡಳಿತ ಭವನ, ಪಟ್ರೇನಹಳ್ಳಿ, ಚಿಕ್ಕಬಳ್ಳಾಪುರ ಜಿಲ್ಲೆ.
**Email ID: dhochikballapur@gmail.com.** **Phone & Fax: 08156-277040**

**ಸಂಖ್ಯೆ: ಎನ್.ಹೆಚ್.ಎಂ/ಚಿಪುರ/ನೇಮಕಾತಿ/03/2020-21** **ದಿನಾಂಕ:- 04-04-2020**

## ಅಧಿಸೂಚನೆ

**ವಿಷಯ:-** ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಖಾಲಿಯಿರುವ District Epidemiologist ಹುದ್ದೆಯನ್ನು ಭರ್ತಿಮಾಡಲು ನೇರ ಸಂದರ್ಶನಕ್ಕೆ (**Walk Interview**) ಆಹ್ವಾನಿಸಿರುವ ಬಗ್ಗೆ.

**ಉಲ್ಲೇಖ:-**
1. 2019-20ನೇ ಸಾಲಿನ ಆರ್.ಓ.ಪಿಯ ಅನುಮೋದನೆಯಂತೆ.
2. ಯೋಜನಾ ನಿರ್ದೇಶಕರು(ಐ.ಡಿ.ಎಸ್.ಪಿ) ರವರ ಮಿಂಚಂಚೆ ದಿನಾಂಕ:02-04-2020.

* * * * *

ಚಿಕ್ಕಬಳ್ಳಾಪುರ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 2019-20ನೇ ಸಾಲಿನ ಆರ್.ಓ.ಪಿ ಅನುಮೋದನೆಯಂತೆ (31/03/2020ರ ಅಂತ್ಯದವರೆಗೆ) ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಖಾಲಿಯಿರುವ District Epidemiologist ಹುದ್ದೆಯನ್ನು ನೇರ ಸಂದರ್ಶನಕ್ಕೆ (Walk Interview) ಮೂಲಕ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ವಿಶೇಷ ಸೂಚನೆಗಳು:**

- ದಿನಾಂಕ: 04/04/2020 ರಿಂದ https://chikkaballapur.nic.in ವೆಬ್‌ಸೈಟ್‌ನಲ್ಲಿ ವಿವರಗಳನ್ನು ಪಡೆಯಬಹುದಾಗಿದೆ.
- ಕೆಳಕಂಡ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕಂಪ್ಯೂಟರ್ ಜ್ಞಾನ ಕಡ್ಡಾಯ.
- ಅರ್ಹ ಅಭ್ಯರ್ಥಿಗಳು ದಿನಾಂಕ: 09/04/2020 ರಂದು ಮೂಲ ದಾಖಲಾತಿಗಳು ಹಾಗೂ ಒಂದು ಸೆಟ್ ಜೆರಾಕ್ಸ್ (ಆದಾಯ ಮತ್ತು ಜಾತಿ ಪ್ರಮಾಣ ಪತ್ರ ಮತ್ತು ವಿಳಾಸ ದೃಢೀಕರಣ ಪತ್ರ ಒಳಗೊಂಡಂತೆ) ಪ್ರತಿಗಳೊಂದಿಗೆ ಬೆಳಿಗ್ಗೆ 10.30ಕ್ಕೆ ಪರಿಶೀಲನೆಗೆ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಅಧಿಕಾರಿಗಳ ಕಚೇರಿಗೆ ಹಾಜರಾಗತಕ್ಕದ್ದು.

| Sl.N | Post | FMR Code | Salary as per 2019-20 ROP | Qualification | Vacant | Vacant Place |
|---|---|---|---|---|---|---|
| 1 | District Epidemiologist | 16.4.2.2.2 | 30,000 | **Essential**- MBBS with Post Graduate Degree/Diploma in Preventive and Social Medicine/Public Health or Epidemiology (such as MPH, DPH, MAE) or BDS/BAMS/BHMS with Master of Public Health/MAE. **Experience Desirable**- 2 years experience in Public Health Programmes or Epidemiology | 1 | IDSP – 1 |

- ಈ ನೇಮಕಾತಿಯು ಎನ್.ಹೆಚ್.ಎಂ / ಎನ್.ಯು.ಹೆಚ್.ಎಂ / ರಾಜ್ಯ ವಲಯದ ನಿಯಮಾವಳಿ, ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
- ಈ ಮೇಲ್ಕಂಡ ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಚಾಲ್ತಿ ಇರುವ ಸರ್ಕಾರದ ನಿಯಮಗಳಂತೆ ನೇಮಕಾತಿ ಮಾಡಲಾಗುವುದು.
- ಯಾವುದೇ ಹುದ್ದೆಗೆ ಅಗತ್ಯವಿರುವಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಅಥವಾ ಹೆಚ್ಚುವರಿ ಅರ್ಜಿಗಳನ್ನು ಸಲ್ಲಿಸಿರುವ ಅರ್ಜಿಗಳಲ್ಲಿ 31/03/2020ರ ಒಳಗೆ ಖಾಲಿಯಾಗುವ ಹುದ್ದೆಗಳನ್ನು Roll out Advertisement ಆಧಾರದಲ್ಲಿ ಭರ್ತಿ ಮಾಡಲಾಗುವುದು.
- ಮೀಸಲಾತಿ ಕೋರುವ ಅಭ್ಯರ್ಥಿಗಳು ಅದಕ್ಕೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಂದರ್ಶನಕ್ಕೆ ಹಾಜರಾದ ದಿನದಂದು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಸಲ್ಲಿಸದ ಪಕ್ಷದಲ್ಲಿ ಅಂತಹ ಅಭ್ಯರ್ಥಿಯನ್ನು ತಿರಸ್ಕರಿಸಲಾಗುವುದು.
- ಹುದ್ದೆಗಳಿಗೆ ಸೂಚಿಸಿದ ವಿದ್ಯಾರ್ಹತೆ ಇಲ್ಲದಿರುವುದು ಹಾಗೂ ಫಲಿತಾಂಶಕ್ಕೆ ಕಾಯುತ್ತಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದಿಲ್ಲ.
- ಸೇವಾ ಅನುಭವವಿದ್ದಲ್ಲಿ, ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಸ್ಥೆಯವರಿಂದ ದೃಢೀಕರಿಸಿ ಸಲ್ಲಿಸುವುದು.
- ಅಭ್ಯರ್ಥಿಗಳು ತಾವು ಸಲ್ಲಿಸುವ ಎಲ್ಲಾ ದಾಖಲೆಗಳ ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ಸ್ವಯಂ ಧೃಢೀಕರಿಸಿ ಸಲ್ಲಿಸತಕ್ಕದ್ದು.
- ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಪ್ರಯಾಣ ಭತ್ಯೆ, ಊಟದ ಭತ್ಯೆ, ದಿನಭತ್ಯೆ ಇತ್ಯಾದಿಗಳನ್ನು ನೀಡಲಾಗುವುದಿಲ್ಲ.

ಸಹಿ/-
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,**
**ಚಿಕ್ಕಬಳ್ಳಾಪುರ ಜಿಲ್ಲೆ**

**ಪ್ರತಿಯನ್ನು:-**

1. ಕಛೇರಿಯ ಪ್ರಕಟಣಾ ಫಲಕಕ್ಕೆ.
2. ಮಾನ್ಯ ಅಭಿಯಾನ ನಿರ್ದೇಶಕರು, ಎನ್.ಹೆಚ್.ಎಂ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ರವರ ಮಾಹಿತಿಗಾಗಿ.
3. ಮಾನ್ಯ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ರವರ ಅವಗಾಹನೆಗೆ ಸಲ್ಲಿಸುತ್ತಾ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
4. ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ ರವರ ಅವಗಾಹನೆಗೆ ಸಲ್ಲಿಸುತ್ತಾ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಜಿಲ್ಲಾ ಮಾಹಿತಿ ಮತ್ತು ತಂತ್ರಜ್ಞಾನ ಅಧಿಕಾರಿಗಳು, ಎನ್.ಐ.ಸಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ರವರಿಗೆ ಸಲ್ಲಿಸುತ್ತಾ ಜಿಲ್ಲಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಕೋರಿದೆ.
6. ಜಿಲ್ಲಾ ಶಸ್ತ್ರಚಿಕಿತ್ಸಕರು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿಗಾಗಿ ರವಾನಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿಕ್ಕಬಳ್ಳಾಪುರ ರವರ ಮಾಹಿತಿ ಹಾಗೂ ಅವಗಾಹನೆಗಾಗಿ ಸಲ್ಲಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಕಚೇರಿ ಪ್ರತಿ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು,
ಚಿಕ್ಕಬಳ್ಳಾಪುರ ಜಿಲ್ಲೆ 4/4/2020